ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ ರವರು ನಿಯಮ 72ರ ಅಡಿಯಲ್ಲಿ ಕೇಳಲಾದ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.

**ಸೂಚನೆ:** ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತ್‌ನಲಿ 2022-23ನೇ ಸಾಲಿನ 15ನೇ ಹಣಕಾಸು ಯೋಜನೆಯಡಿ ನಿಗದಿಪಡಿಸಿದ ಅನುದಾನದಂತೆ ಕಾಮಗಾರಿಯ ಕ್ರಿಯಾಯೋಜನೆ ತಯಾರಿಸಲು ಗಾಂಧಿ ಸಾಕ್ಷಿ ಕಾಯಕದಲ್ಲಿ ದಾಖಲಿಸಿ ಅನುಮೋದನೆ ಪಡೆದು ನಿಯಮದಂತೆ ಕಾಮಗಾರಿ ಮುಕ್ತಾಯಗೊಳಿಸಿದ್ದರೂ ಇಲ್ಲಿಯವರೆಗೆ ಹಣ ಬಿಡುಗಡೆಯಾಗದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

**ಉತ್ತರ:** 15ನೇ ಹಣಕಾಸು ಆಯೋಗದ ಅನುದಾನದ ಅವಧಿಯು 2020-21ರಿಂದ 2024-25ರವರೆಗೆ ಇರುತ್ತದೆ. 2020-21 ಹಾಗೂ 2021-22 ನೇ ಸಾಲಿನಲ್ಲಿ ಕೇಂದ್ರ ಸರ್ಕಾರವು ರಾಜ್ಯದ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳಿಗೆ 15ನೇ ಹಣಕಾಸು ಆಯೋಗದ ಅನುದಾನವನ್ನು ಬಿಡುಗಡೆ ಮಾಡಿರುತ್ತದೆ. ಅದರಂತೆ ರಾಜ್ಯ ಸರ್ಕಾರವು ರಾಜ್ಯದ ಎಲ್ಲಾ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳಿಗೆ ಅನುದಾನವನ್ನು ಬಿಡುಗಡೆ ಮಾಡಿರುತ್ತದೆ.

ರಾಜ್ಯದ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳ ಪಾಲಿನ 2022-23ನೇ ಸಾಲಿನ 15ನೇ ಹಣಕಾಸು ಆಯೋಗದ ಅನುದಾನವನ್ನು ಸಹ ಬಿಡುಗಡೆ ಮಾಡುವಂತೆ ಕೋರಲಾಗಿದ್ದು, ಅರೆ ಸರ್ಕಾರಿ ಪತ್ರ ದಿನಾಂಕ:24.03.2023ರ ಪತ್ರದಲ್ಲಿ ಕೇಂದ್ರ ಸರ್ಕಾರದ ವಿತ್ತ ಮಂತ್ರಾಲಯವು ದಿನಾಂಕ:14-7-2021ರಂದು ಹೊರಡಿಸಿರುವ 15ನೇ ಹಣಕಾಸು ಆಯೋಗ ಅನುದಾನ ಬಳಕೆಯ ಅನುಷ್ಠಾನ ಮಾರ್ಗಸೂಚಿಗಳಲ್ಲಿ ಚುನಾಯಿತ ಪ್ರತಿನಿಧಿಗಳ ಆಡಳಿತ ಅಸ್ತಿತ್ವದಲ್ಲಿರುವ ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಗೆ ಅನುದಾನವನ್ನು ಬಿಡುಗಡೆಗೊಳಿಸಬೇಕೆಂಬ ನಿಬಂಧನೆ ವಿಧಿಸಲಾಗಿದ್ದು, ಪ್ರಸ್ತುತ ರಾಜ್ಯದಲ್ಲಿ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತ್‌ಗಳಲ್ಲಿ ಚುನಾಯಿತ ಪ್ರತಿನಿಧಿಗಳು ಇಲ್ಲದಿರುವುದರಿಂದ, ಕೇಂದ್ರ ಸರ್ಕಾರವು 2022-23ನೇ ಸಾಲಿನಲ್ಲಿ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳ ಪಾಲಿನ ಶೇಕಡ 15ರಷ್ಟು 15ನೇ ಹಣಕಾಸು ಆಯೋಗದ ಅನುದಾನವನ್ನು ಈವರೆವಿಗೂ ಬಿಡುಗಡೆಗೊಳಿಸಿರುವುದಿಲ್ಲ. ಕೇಂದ್ರ ಸರ್ಕಾರವು ಅನುದಾನ ಬಿಡುಗಡೆ ಮಾಡಿದ ಕೂಡಲೇ ತಾಲ್ಲೂಕು ಮತ್ತು ಜಿಲ್ಲಾ ಪಂಚಾಯಿತಿಗಳಿಗೆ ಅನುದಾನ ಬಿಡುಗಡೆ ಮಾಡಲಾಗುವುದು.

ಸಂಖ್ಯೆ:ಗ್ರಾಅಪಂರಾ 368 ಜಿಪಸ 2023

(ಪ್ರಿಯಾಂಕ್ ಖರ್ಗೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ

ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.